ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
Website : https://kptcl.karnataka.gov.in

ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು–560 009

ಸಂಖ್ಯೆ: ಕವಿಪ್ರನಿನಿ/ಬಿ21/ಬಿ16/7228/85–86
ಲಗತ್ತು : 01 ಸುತ್ತೋಲೆ

ದಿನಾಂಕ : 25 JAN 2022

## ಸುತ್ತೋಲೆ

ವಿಷಯ: ಅಧಿಕಾರಿ/ನೌಕರರ ವಿರುದ್ಧ ಶಿಸ್ತು ಕ್ರಮ ಜರುಗಿಸುವಲ್ಲಿ ಆಗುವ ವಿಳಂಬವನ್ನು ತಡೆಗಟ್ಟುವ ಕುರಿತು.

ಉಲ್ಲೇಖ: ಸರ್ಕಾರದ ಸುತ್ತೋಲೆ ಸಂಖ್ಯೆ ಸಿಆಸುಇ/18/ಸೇಇವಿ/2021 ದಿನಾಂಕ 04.10.2021.

***

ಸರ್ಕಾರದ ದಿನಾಂಕ 28.06.2001 ರ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ/19/ಸೇಇವಿ/2001 ರಲ್ಲಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ–11 ರಡಿಯಲ್ಲಿ ಶಿಸ್ತಿನ ಕ್ರಮ ಪ್ರಾರಂಭಿಸಿ ಮುಕ್ತಾಯಗೊಳಿಸಲು ವಿವಿಧ ಹಂತಗಳಿಗಾಗಿ ಗರಿಷ್ಠ ಕಾಲಮಿತಿಗಳನ್ನು ನಿಗದಿಪಡಿಸಲಾಗಿರುತ್ತದೆ. ಮುಂದುವರೆದು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ–12 ರಡಿಯಲ್ಲಿ ಶಿಸ್ತು ಕ್ರಮ ವಹಿಸಲು ಕಾಲಮಿತಿಯನ್ನು ನಿಗದಿಪಡಿಸಿರುವ ಉಲ್ಲೇಖದ ದಿನಾಂಕ 04.10.2021 ರ ಸರ್ಕಾರದ ಸುತ್ತೋಲೆಯನ್ನು ನಿಗಮದಲ್ಲಿ ಅಳವಡಿಸಿಕೊಳ್ಳಲಾಗಿದೆ.

ಕವಿಪ್ರನಿನಿ ಹಾಗು ಎಸ್ಕಾಂಗಳ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರ ಮೇಲಿನ ಆಪಾದಿತ ದುರ್ನಡತೆಗೆ ಸಂಬಂಧಿಸಿದಂತೆ ಕವಿಪ್ರನಿನಿ ನೌಕರರ (ವರ್ಗೀಕರಣ, ಶಿಸ್ತು, ನಿಯಂತ್ರಣ ಮತ್ತು ಮೇಲ್ಮನವಿ) ನಿಬಂಧನೆಗಳ ನಿಬಂಧನೆ–11 ಮತ್ತು ನಿಬಂಧನೆ–12 ರಡಿಯಲ್ಲಿ ಶಿಸ್ತು ಕ್ರಮ ಕೈಗೊಳ್ಳುವಾಗ ಸರ್ಕಾರದ ಸುತ್ತೋಲೆಗಳಲ್ಲಿ ನಿಗದಿಪಡಿಸಿರುವ ಕಾಲಮಿತಿಯನ್ನು ಎಲ್ಲಾ ಶಿಸ್ತು ಪ್ರಾಧಿಕಾರಿಗಳು ಕಟ್ಟು ನಿಟ್ಟಾಗಿ ಪಾಲಿಸುವಂತೆ ಸೂಚಿಸಲಾಗಿದೆ.

'ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ
ರವರಿಂದ ಅನುಮೋದಿಸಲ್ಪಟ್ಟಿದೆ'

ನಿರ್ದೇಶಕರು (ಆ ಮತ್ತು ಮಾ.ಸಂ)
ಕವಿಪ್ರನಿನಿ

**ಪ್ರತಿಗಳು:**

1. ವ್ಯವಸ್ಥಾಪಕ ನಿರ್ದೇಶಕರು, ಎಸ್ಕಾಂಗಳು / ಪಿಸಿಕೆಎಲ್
2. ಎಲ್ಲಾ ಪ್ರಧಾನ ವ್ಯವಸ್ಥಾಪಕರು(ಆ ಮತ್ತು ಮಾ.ಸಂ.ಅ), ಎಸ್ಕಾಂಗಳು
3. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂಗಳು.
4. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ / ಎಸ್ಕಾಂಗಳು
5. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ / ಎಸ್ಕಾಂಗಳು
6. ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಹಣಕಾಸು)/(ಪ್ರಸರಣ)/(ಆ&ಮಾ.ಸಂ), ಕವಿಪ್ರನಿನಿ ರವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.

ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ **http://kptcl.karnataka.gov.in->eprasarana** ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

1. ಎಲ್ಲಾ ಅಧೀಕ್ಷಕ ಇಂಜಿನಿಯರ್/ನಿಯಂತ್ರಣಾಧಿಕಾರಿ, ಕವಿಪ್ರನಿನಿ/ ಎಸ್ಕಾಂಗಳು
2. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್/ ಉಪ ಲೆಕ್ಕಾಧಿಕಾರಿ, ಕವಿಪ್ರನಿನಿ / ಎಸ್ಕಾಂಗಳು
3. ಎಲ್ಲಾ ಕಾರ್ಯಾಲಯದ ಎಲ್ಲಾ ಅಧಿಕಾರಿಗಳು / ಎಲ್ಲಾ ಲೆಕ್ಕಾಧಿಕಾರಿಗಳು (ಆಂ.ಪ.), ಕವಿಪ್ರನಿನಿ / ಎಸ್ಕಾಂಗಳು

ಪ್ರತಿಗಳು ಮಾಹಿತಿಗಾಗಿ:

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿನಿ ನೌಕರರ ಸಂಘ (ನೋ.ಸಂ.659) ಹಾಗು ನಿರ್ದೇಶಕರು, ಕವಿಪ್ರನಿನಿ ಮತ್ತು ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರುಗಳ ಸಂಘ ಹಾಗು ನಿರ್ದೇಶಕರು, ಕವಿಪ್ರನಿನಿ ಮತ್ತು ಎಸ್ಕಾಂಗಳು
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ನೌಕರರ ಸಂಘ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ವರ್ಗಗಳ ಕಲ್ಯಾಣ ಸಂಘ, ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಡಿಪ್ಲೋಮ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ / ಎಸ್ಕಾಂಗಳು ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.

# ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ/18/ಸೇಇವಿ/ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ,
ಬೆಂಗಳೂರು, ದಿನಾಂಕ: 04.10.2021

## ಸುತ್ತೋಲೆ

ವಿಷಯ: ಸರ್ಕಾರಿ ನೌಕರರ ವಿರುದ್ಧ ಶಿಸ್ತು ಕ್ರಮ ಜರುಗಿಸುವಲ್ಲಿ ಆಗುವ ವಿಳಂಬವನ್ನು ತಡೆಗಟ್ಟುವ ಕುರಿತು.

ಉಲ್ಲೇಖ:
1. ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ /19/ಸೇಇವಿ/2001, ದಿನಾಂಕ:28.06.2001.
2. ಸುತ್ತೋಲೆ ಸಂಖ್ಯೆ: ಸಿಆಸುಇ 111 ಸೇಇವಿ 2013, ದಿನಾಂಕ: 22.10.2013.

*******

1. ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ (1)ರ ಅಧಿಕೃತ ಜ್ಞಾಪನದಲ್ಲಿ ಸರ್ಕಾರಿ ನೌಕರನ ಮೇಲಿನ ಆಪಾದಿತ ದುರ್ನಡತೆಗೆ ಸಂಬಂಧಿಸಿದಂತೆ ಶಿಸ್ತಿನ ಕ್ರಮ ಪ್ರಾರಂಭಿಸಿ ಮುಕ್ತಾಯಗೊಳಿಸಲು ವಿವಿಧ ಹಂತಗಳಿಗಾಗಿ ಈ ಕೆಳಕಂಡ ಗರಿಷ್ಠ ಕಾಲಮಿತಿಗಳನ್ನು ನಿಗದಿಪಡಿಸಲಾಗಿದೆ:

| ಕ್ರ.ಸಂ. | ಶಿಸ್ತಿನ ಕ್ರಮದ ಹಂತ | ಗರಿಷ್ಠ ಕಾಲಮಿತಿ |
|---|---|---|
| (ಎ) | ಸರ್ಕಾರಿ ನೌಕರರ ಅಕ್ರಮಗಳು, ದುರ್ನಡತೆಗಳು ಶಿಸ್ತಿನ ಪ್ರಾಧಿಕಾರದ ಗಮನಕ್ಕೆ ಬಂದ ದಿನಾಂಕದಿಂದ ದೋಷಾರೋಪಣಾ ಪಟ್ಟಿಯನ್ನು ತಯಾರಿಸುವ ಸಲುವಾಗಿ ದಾಖಲೆಗಳನ್ನು ಪಡೆಯಲು ಅಥವಾ ಪ್ರಾರಂಭಿಕ ತನಿಖೆ, ವಿಚಾರಣೆಯನ್ನು ಅಂತಿಮಗೊಳಿಸಲು ಹಾಗೂ ದೋಷಾರೋಪಣಾ ಪಟ್ಟಿಯನ್ನು ತಯಾರಿಸಿ ಜಾರಿಗೊಳಿಸಲು | 1 ತಿಂಗಳು |
| (ಬಿ) | ದೋಷಾರೋಪಣಾ ಪಟ್ಟಿಗೆ ಸರ್ಕಾರಿ ನೌಕರನ ವಿವರಣೆಯನ್ನು ಪಡೆಯಲು ಹಾಗೂ ವಿಚಾರಣಾ ಅಧಿಕಾರಿ ಮತ್ತು ಮಂಡನಾಧಿಕಾರಿಯನ್ನು ನೇಮಿಸಲು | 1 ತಿಂಗಳು |
| (ಸಿ) | ವಿಚಾರಣೆಯನ್ನು ನಡೆಸಲು ಹಾಗೂ ವಿಚಾರಣಾ ವರದಿಯನ್ನು ಮಂಡಿಸಲು | 4 ತಿಂಗಳು |
| (ಡಿ) | ವಿಚಾರಣಾ ವರದಿಯನ್ನು ಪರಿಶೀಲಿಸಲು ಹಾಗೂ ಅದನ್ನು ಸ್ವೀಕರಿಸುವ ಬಗ್ಗೆ ನಿರ್ಣಯಿಸಲು | 1 ತಿಂಗಳು |
| (ಇ) | ಕಾರಣ ಕೇಳುವ 2ನೇ ಸೂಚನಾ ಪತ್ರವನ್ನು ವಿಚಾರಣಾ ವರದಿಯ ಜೊತೆಗೆ, ಆಪಾದಿತ ಸರ್ಕಾರಿ ನೌಕರನಿಗೆ ನೀಡಲು; | 1 ತಿಂಗಳು |
| (ಎಫ್) | ಅಂತಿಮ ಆದೇಶವನ್ನು ಹೊರಡಿಸಲು; | 1 ತಿಂಗಳು |

...2

2. ಹೀಗೆ ಸರ್ಕಾರಿ ನೌಕರನ ಮೇಲಿನ ಆಪಾದಿತ ದುರ್ನಡತೆಗೆ ಶಿಸ್ತಿನ ಕ್ರಮ ಜರುಗಿಸಲು ಒಟ್ಟು 9 ತಿಂಗಳ ಕಾಲಮಿತಿಯನ್ನು ನಿಗದಿಪಡಿಸಲಾಗಿದ್ದು, ಸರ್ಕಾರದ ಕಾರ್ಯದರ್ಶಿಗಳು ಹಾಗೂ ಇಲಾಖಾ ಮುಖ್ಯಸ್ಥರು ಈ ಸೂಚನೆಗಳನ್ನು ಚಾಚೂ ತಪ್ಪದೆ ಕಡ್ಡಾಯವಾಗಿ ಪಾಲಿಸಬೇಕೆಂದು ಹಾಗೂ ಇದನ್ನು ಸಂಬಂಧಪಟ್ಟ ಎಲ್ಲಾ ಶಿಸ್ತು ಪ್ರಾಧಿಕಾರಗಳ ಗಮನಕ್ಕೆ ಪಾಲನೆಗಾಗಿ ತರತಕ್ಕದ್ದೆಂದು ತಿಳಿಸಲಾಗಿದೆ. ಮುಂದುವರೆದು, ಈ ಸೂಚನೆಗಳನ್ನು ಉಲ್ಲಂಘಿಸುವ ಅಧಿಕಾರಿಗಳು ತಾವೇ ಕರ್ತವ್ಯಲೋಪದ ಆಧಾರದ ಮೇಲೆ ಶಿಸ್ತಿನ ಕ್ರಮಕ್ಕೆ ಒಳಪಡಬೇಕಾಗುತ್ತದೆ ಎಂದು ತಿಳಿಸಲಾಗಿದೆ.

3. ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ (2)ರ ಸುತ್ತೋಲೆಯಲ್ಲಿ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 12ರಡಿ ಸರ್ಕಾರಿ ನೌಕರರ ವಿರುದ್ಧ ಕೈಗೊಳ್ಳಬಹುದಾದ ಶಿಸ್ತು ಪ್ರಕರಣಗಳನ್ನು ಶೀಘ್ರವಾಗಿ ವಿಲೇವಾರಿ ಮಾಡುವಂತೆ ಸೂಚಿಸಲಾಗಿದೆ.

4. ಮೇಲಿನ ಕಂಡಿಕೆ (1)ರಲ್ಲಿ ತಿಳಿಸಲಾದ ಕಾಲಮಿತಿಯನ್ನು ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 11ರಡಿ ಕಠಿಣ ದಂಡನೆಯನ್ನು ವಿಧಿಸಲು ಇರುವ ಪ್ರಕ್ರಿಯೆಗೆ ನಿಗದಿಪಡಿಸಲಾಗಿರುತ್ತದೆ. ಅದೇ ನಿಯಮಗಳ ನಿಯಮ 12ರಡಿ ಶಿಸ್ತು ಕ್ರಮವಹಿಸಲು ಈ ಕೆಳಗಿನಂತೆ ಕಾಲಮಿತಿಯನ್ನು ನಿಗದಿಪಡಿಸಲಾಗಿದೆ:

| | | |
|---|---|---|
| (ಎ) | ಆಪಾದಿತ ನೌಕರನು ಸಮಜಾಯಿಷಿ ನೀಡಲು | ನಿಯಮ 12ರ ಅಡಿ ನೋಟೀಸ್ ಸ್ವೀಕರಿಸಿದಂದಿನಿಂದ ಗರಿಷ್ಠ 15 ದಿನಗಳು. ಈ ಅವಧಿಯಲ್ಲಿ ಸ್ವೀಕೃತಗೊಳ್ಳದಿದ್ದಲ್ಲಿ ಯಾವುದೇ ಸಮಜಾಯಿಷಿ ಇರುವುದಿಲ್ಲವೆಂದು ಪರಿಭಾವಿಸಿ ಶಿಸ್ತು ಪ್ರಾಧಿಕಾರಿಯು ಮುಂದಿನ ಪ್ರಕ್ರಿಯೆ ಪ್ರಾರಂಭಿಸುವುದು. |
| (ಬಿ) | ಶಿಸ್ತು ಪ್ರಾಧಿಕಾರಿಯು ನಿರ್ಣಯ ಕೈಗೊಂಡು ಆದೇಶ ಹೊರಡಿಸಲು | ಆಪಾದಿತ ನೌಕರನ ಸಮಜಾಯಿಷಿ ಸ್ವೀಕಾರಗೊಂಡಾಗಿನಿಂದ ಗರಿಷ್ಠ 1 ತಿಂಗಳು. |

ಮುಂದುವರೆದು ಆಪಾದಿತ ನೌಕರನಿಗೆ ಸಮಜಾಯಿಷಿ ನೀಡಲು ಅಗತ್ಯವಾದ ಸೂಕ್ತ ದಾಖಲೆ ಪ್ರತಿಗಳನ್ನು ಅವನ ಕೋರಿಕೆಯ ಮೇರೆಗೆ ಆದ್ಯತೆಯ ಮೇಲೆ ಒದಗಿಸಲು ಶಿಸ್ತು ಪ್ರಾಧಿಕಾರಿಯು ಕ್ರಮ ವಹಿಸಬೇಕು.

5. ಎಲ್ಲಾ ಶಿಸ್ತು ಪ್ರಾಧಿಕಾರಗಳು ಮೇಲೆ ನಿಗದಿಪಡಿಸಲಾದ ಕಾಲಮಿತಿಯನ್ನು ಕಡ್ಡಾಯವಾಗಿ ಪಾಲಿಸುವಂತೆ ಸೂಚಿಸಿದೆ.

4/10/2021

(ನಾಗರತ್ನ ವಿ.ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-2)

ಇವರಿಗೆ:-
ಸಂಕಲನಕಾರರು, ಕರ್ನಾಟಕ ಇ ರಾಜ್ಯ ಪತ್ರ.

ಪ್ರತಿಯನ್ನು:-

1. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು.
4. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು.
6. ರಾಜ್ಯಪಾಲರ ವಿಶೇಷ ಕಾರ್ಯದರ್ಶಿ.
7. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ-110 011.
8. ಎಲ್ಲಾ ಇಲಾಖಾ ಮುಖ್ಯಸ್ಥರು
9. ಎಲ್ಲಾ ಪ್ರಾದೇಶಿಕ ಆಯುಕ್ತರು
10. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್
11. *ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ಪರಿಷತ್ತು, ಬೆಂಗಳೂರು
12. *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
13. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-9.
14. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
15. *ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬೆಂಗಳೂರು.
16. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು
17. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
18. ರಕ್ಷಾ ಕಡತ/ಬಿಡಿ ಪ್ರತಿಗಳು.

(*ಪ್ರತ್ಯೇಕ ಪತ್ರದೊಂದಿಗೆ)